# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎ.ಜಿ.ದೇಸಾಯಿ – ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹತ್ತರಗಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ.ಪ.ಸಂ. Compt/UPLOK/BGM/1331/2013/PP, ದಿನಾಂಕ: 27.05.2017

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 20.05.2017 ರಂದು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಶಿವಾಜಿ ಲಕ್ಷ್ಮಣ್ ಪಾಟೀಲ್, ಮನೆ ನಂ. 1331, ಸರಸ್ವತಿ ನಗರ, ಪೈಪ್‌ಲೈನ್ ರಸ್ತೆ, ಹಿಂಡಲಗ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿ, ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿನ ಮನಗುತ್ತಿ ಗ್ರಾಮ ಪಂಚಾಯತಿ ವತಿಯಿಂದ 2011-12 ನೇ ಸಾಲಿನ ಇಂದಿರಾ ಆವಾಜ್ ಯೋಜನೆ ಹಾಗೂ ಅಂಬೇಡ್ಕರ್ ಆವಾಜ್ ಯೋಜನೆಯಡಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿ, ಸರ್ಕಾರದ ಅನುದಾನವನ್ನು ದುರುಪಯೋಗಪಡಿಸಿಕೊಂಡಿರುತ್ತಾರೆಂದು, ಆದ್ದರಿಂದ, ಮನಗುತ್ತಿ ಗ್ರಾಮ ಪಂಚಾಯತಿ ಕಾರ್ಯದರ್ಶಿ/ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲಲೆ ಇವರ ವಿರುದ್ಧ ಕ್ರಮ ಜರುಗಿಸಬೇಕೆಂದು ಕೋರಿದ್ದು, ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 9 ರಡಿ ಪ್ರದತ್ತವಾದ ಅಧಿಕಾರದಡಿ ತನಿಖೆ ಕೈಗೊಳ್ಳಲಾಗಿದೆ.

ತನಿಖಾ ವರದಿಯಲ್ಲಿ, ಪ್ರಕರಣದಲ್ಲಿ ಒಳಗೊಂಡ ಫಲಾನುಭವಿಗಳನ್ನು ವಸತಿ ಯೋಜನೆಯಡಿಯಲ್ಲಿ ಆಯ್ಕೆ ಮಾಡಲು ಅವರು ಅರ್ಹ ಫಲಾನುಭವಿಗಳೆಂದು ತೋರಿಸಲು ಸಂಬಂಧಪಟ್ಟ ಜಾತಿ ಪ್ರಮಾಣ ಪತ್ರವನ್ನಾಗಲೀ, ಆದಾಯ ಪ್ರಮಾಣ ಪತ್ರವನ್ನಾಗಲೀ ಹಾಗೂ ಸದರಿ ಫಲಾನುಭವಿಗಳಿಗೆ ಈ ಹಿಂದೆ ವಸತಿ ಇಲ್ಲದೇ ಇದ್ದ ಬಗ್ಗೆ ಪ್ರಮಾಣ ಪತ್ರವನ್ನಾಗಲೀ ಹಾಜರುಪಡಿಸಿರುವುದಿಲ್ಲ. ಈ ಹಂತದಲ್ಲಿ ದೂರಿಗೆ ಸಂಬಂಧಪಟ್ಟಂತೆ ಹುಕ್ಕೇರಿ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗೆ ವರದಿಯನ್ನು ಮತ್ತು ದಾಖಲೆಗಳನ್ನು ಹಾಜರುಪಡಿಸುವಂತೆ ಕೋರಿ ಪತ್ರವನ್ನು ಬರೆಯಲಾಗಿದ್ದು, ಆದಾಯ ಪ್ರಮಾಣ ಪತ್ರ ಮತ್ತು ಜಾತಿ ಪ್ರಮಾಣ ಪತ್ರದ ಪ್ರತಿಯನ್ನಾಗಲೀ ಹಾಜರುಪಡಿಸಿರುವುದಿಲ್ಲ. ಇದಲ್ಲದೇ, ಫಲಾನುಭವಿಗಳು ಅನುದಾನವನ್ನು ಉಪಯೋಗಿಸಿಕೊಂಡು ಮನೆ ಕಟ್ಟಿರುವ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿರುವುದಿಲ್ಲ. ಆದರಿಂದ ಈ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಸದರಿ ಇಂದಿರಾ ಆವಾಜ್ ಯೋಜನೆಯಡಿಯನ್ನು ಸರಿಯಾಗಿ ಅನುಷ್ಠಾನಗೊಳಿಸಲಾಗಿದೆ ಎಂದು ತೀರ್ಮಾಸಲು ಬರಲು ಆಗದಿರುವ ಹಿನ್ನೆಲೆಯಲ್ಲಿ ಶ್ರೀ ಎಸ್.ಜಿ.ಕಾರತಗಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮತ್ತು ಶ್ರೀ ಎ.ಜಿ.ದೇಸಾಯಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಇವರುಗಳು ಕರ್ತವ್ಯಲೋಪ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ ಎಂದು ತಿಳಿಸಿರುತ್ತಾರೆ.

ಶ್ರೀ ಎಸ್.ಜಿ.ಕಾರತಗಿ, ಹಿಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಇವರು ದಿನಾಂಕ 31.07.2011 ರಂದು ನಿವೃತ್ತಿ ಹೊಂದಿರುವುದರಿಂದ ಮತ್ತು ಪ್ರಕರಣದ ಯೋಜನೆಯು 2011-12 ನೇ ಸಾಲಿಗೆ ಸಂಬಂಧಿಸಿದ್ದಾಗಿರುವುದರಿಂದ ಅರ ವಿರುದ್ಧ ಕ್ರಮ ಕೈಗೊಳ್ಳಲು ಅವಕಾಶ ಇಲ್ಲದಿರುವ ಕಾರಣ ಇವರನ್ನು ಪ್ರಕರಣದಿಂದ ಕೈಬಿಡಲಾಗಿದೆ.

ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮಗಳು 3(1)(ii) ಮತ್ತು (iii) ರನ್ವಯ ಎದುರುದಾರರಾದ ಶ್ರೀ ಎ.ಜಿ.ದೇಸಾಯಿ – ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹತ್ತರಗಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ) ಇವರು ಶಿಸ್ತು ಕ್ರಮಕ್ಕೆ ಭಾದ್ಯರಾಗಿರುತ್ತಾರೆಂದು

ಕಂಡು ಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಕ್ರಮ ಜರುಗಿಸಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14ಎ ರಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಲೋಕಾಯುಕ್ತ ಪ್ರಾಧಿಕಾರಕ್ಕೆ ಒಪ್ಪಿಸುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984 ರ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಎ.ಜಿ.ದೇಸಾಯಿ – ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹತ್ತರಗಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ) ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 502 ಗ್ರಾಪಂಕಾ 2017, ಬೆಂಗಳೂರು, ದಿನಾಂಕ: 13.06.2017**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎ.ಜಿ.ದೇಸಾಯಿ – ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹತ್ತರಗಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ) ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
   **(ಮೇಲೆ ಓದಲಾದ ಪತ್ರದಲ್ಲಿ ಸಲ್ಲಿಸಲಾದ ಮೂಲ ದಾಖಲಾತಿಗಳನ್ನು ಪುಟ ಸಂಖ್ಯೆ 1 ರಿಂದ 337 ರವರೆಗೆ ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ)**
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
5. ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ತಾಲ್ಲೂಕು ಪಂಚಾಯತಿ, ಬೆಳಗಾವಿ.
   (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ಸಲ್ಲಿಸುವುದು.)
6. ಶ್ರೀ ಎ.ಜಿ.ದೇಸಾಯಿ – ಪ್ರಭಾರ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಮನಗುತ್ತಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ (ಪ್ರಸ್ತುತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಹತ್ತರಗಿ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ)
7. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.